## 6. ವಿದ್ಯಾರ್ಹತೆ:

ಯು.ಜಿ.ಸಿ. ಇಂದ ಮಾನ್ಯತೆ ಪಡೆದಿರುವ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಅಥವಾ ತತ್ಸಮಾನ ಪದವಿಯನ್ನು ನಿಗದಿಪಡಿಸಿರುವ ಕೊನೆಯ ದಿನಾಂಕ, ಅಂದರೆ 01.04.2020ಕ್ಕೆ ಹೊಂದಿರಬೇಕು. (ಮಾಜಿ ಸೈನಿಕ ಅಭ್ಯರ್ಥಿಗಳು ಸೈನ್ಯದಲ್ಲಿ ನೀಡಿದ ಪದವಿ ಪ್ರಮಾಣ ಪತ್ರವನ್ನು ದಿನಾಂಕ: 01.04.2020 ರೊಳಗೆ ಪಡೆದಿದ್ದರೆ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಪರಿಗಣಿಸಲಾಗುವುದು).

ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 81 ಸೇವನೆ 2017, ದಿನಾಂಕ: 27.02.2018 ರನ್ವಯ ಪದವಿ ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳನ್ನು ಕೆಳಗಿನಂತೆ ಸ್ಪಷ್ಟಪಡಿಸಲಾಗಿರುತ್ತದೆ.

1) ಯುಜಿಸಿಯಿಂದ ಮಾನ್ಯತೆ ಹೊಂದಿರುವ ಪರಿಗಣಿತ ವಿಶ್ವವಿದ್ಯಾಲಯಗಳು, ಖಾಸಗಿ/ಡೀಮ್ಡ್ ಹಾಗೂ ಹೊರರಾಜ್ಯದ ವಿಶ್ವವಿದ್ಯಾಲಯಗಳಿಂದ ಪಡೆದ ಪದವಿಗಳು. ಆದರೆ ವಿಶ್ವವಿದ್ಯಾಲಯಗಳ ಪದವಿಯ ತತ್ಸಮಾನದ (Equivalence of Degree) ಬಗ್ಗೆ ಶಿಕ್ಷಣಕ್ಕೆ ಸಂಬಂಧಿಸಿದಂತೆ, ಆಯಾ ವಿಶ್ವವಿದ್ಯಾಲಯ ಮತ್ತು ಉದ್ಯೋಗಕ್ಕೆ ಸಂಬಂಧಿಸಿದಂತೆ ಉದ್ಯೋಗ ನೀಡುವ ಪ್ರಾಧಿಕಾರ ತೀರ್ಮಾನ ತೆಗೆದುಕೊಳ್ಳಬೇಕಾಗಿರುತ್ತದೆ.
2) ಅಂಚೆ ಮತ್ತು ದೂರ ಶಿಕ್ಷಣದ ಮುಖಾಂತರ ಪಡೆದಿರುವ ಪದವಿಗಳು. ಆದರೆ, ನಿಯಮಬಾಹಿರವಾಗಿ ಕೆಲವು ವಿಶ್ವವಿದ್ಯಾಲಯಗಳು ಯು.ಜಿ.ಸಿ.ಯ ಅನುಮೋದನೆ ಇಲ್ಲದೆ ನಡೆಸುತ್ತಿರುವ ಅಂಚೆ ಮತ್ತು ದೂರ ಶಿಕ್ಷಣದ ಕೋರ್ಸುಗಳನ್ನು ಹಾಗೂ ಅಂಚೆ ಮತ್ತು ದೂರ ಶಿಕ್ಷಣದ ಮುಖಾಂತರ ಪಡೆದ ತಾಂತ್ರಿಕ ಪದವಿಗಳನ್ನು ನೇಮಕಾತಿಗೆ ಪರಿಗಣಿಸುವಂತಿಲ್ಲ.

### ಸೇವಾನಿರತ ಅಭ್ಯರ್ಥಿಗಳಿಗೆ ವಿದ್ಯಾರ್ಹತೆ ಮತ್ತು ಅನುಭವ :

ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಅಥವಾ ತತ್ಸಮಾನ ಪದವಿಯನ್ನು ನಿಗದಿಪಡಿಸಿರುವ ಕೊನೆಯ ದಿನಾಂಕ ಅಂದರೆ 01.04.2020ಕ್ಕೆ ಹೊಂದಿರಬೇಕು ಮತ್ತು ಪೊಲೀಸ್ ಇಲಾಖೆಯ ಯಾವುದೇ ವೃಂದದಲ್ಲಿ 5 ವರ್ಷಗಳ ಕನಿಷ್ಠ ಸೇವೆಯನ್ನು ಸಹಾಯಕ ಪೊಲೀಸ್ ಸಬ್ಇನ್ಸ್‌ಪೆಕ್ಟರ್ / ಹೆಡ್ ಕಾನ್ಸ್‌ಟೇಬಲ್ / ಪೊಲೀಸ್ ಕಾನ್ಸ್‌ಟೇಬಲ್ ಆಗಿ ಪೂರ್ಣಗೊಳಿಸಿರಬೇಕು ಹಾಗೂ ಹಾಲಿ ಪೊಲೀಸ್ ಇಲಾಖೆಯಲ್ಲಿ ಮೇಲಿನ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರಬೇಕು, (ಸೇವಾನಿರತ ಅಭ್ಯರ್ಥಿಗಳು ಅಧಿಸೂಚನೆಯ ಪುಟ ಸಂಖ್ಯೆ 25 ಮತ್ತು 26 ರಲ್ಲಿರುವ ಅನುಬಂಧ–'ಎ' & 'ಬಿ' ಯನ್ನು ಕಡ್ಡಾಯವಾಗಿ ನಿಗದಿಪಡಿಸಿರುವ ಕೊನೆಯ ದಿನಾಂಕ ಅಂದರೆ 01.04.2020 ರೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು).

ಸೇವಾನಿರತ ಮಾಜಿ ಸೈನಿಕ ಮೀಸಲಾತಿ ಕೋರುವ ಮಾಜಿ ಸೈನಿಕ ಅಭ್ಯರ್ಥಿಗಳು ಸಹ ಪೊಲೀಸ್ ಇಲಾಖೆಯ ಯಾವುದೇ ವೃಂದದಲ್ಲಿ 5 ವರ್ಷಗಳ ಕನಿಷ್ಠ ಸೇವೆಯನ್ನು ಸಹಾಯಕ ಪೊಲೀಸ್ ಸಬ್ಇನ್ಸ್‌ಪೆಕ್ಟರ್ / ಹೆಡ್ ಕಾನ್ಸ್‌ಟೇಬಲ್ / ಪೊಲೀಸ್ ಕಾನ್ಸ್‌ಟೇಬಲ್ ಆಗಿ ಪೂರ್ಣಗೊಳಿಸಿರಬೇಕು. ಹಾಗೂ ಪ್ರಸ್ತುತ ಪೊಲೀಸ್ ಇಲಾಖೆಯಲ್ಲಿ ಮೇಲಿನ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವ ಪೊಲೀಸ್ ಸಿಬ್ಬಂದಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿದ್ದು, ಅಂತಹ ಅಭ್ಯರ್ಥಿಗಳನ್ನು ಮಾತ್ರ ಮಾಜಿ ಸೈನಿಕ ಸೇವಾನಿರತ ಮೀಸಲಾತಿ ಅಡಿಯಲ್ಲಿ ಪರಿಗಣಿಸಲಾಗುವುದು.

**ಟಿಪ್ಪಣಿ:**

ಎ) ಮೇಲೆ ನಮೂದಿಸಿರುವ ವಿದ್ಯಾರ್ಹತೆ ಹಾಗೂ ಅನುಭವವನ್ನು ಹೊಂದದೇ ಇರುವ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದು, ನಂತರ ನಿಗದಿಪಡಿಸಲಾದ ವಿದ್ಯಾರ್ಹತೆ ಮತ್ತು ಅನುಭವವನ್ನು ಹಾಗೂ ಅಂಕಪಟ್ಟಿ ಹೊಂದಿರುವುದಿಲ್ಲವೆಂದು ನೇಮಕಾತಿ ಸಮಿತಿಗೆ ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಯಾವುದೇ ಹಂತದಲ್ಲಾದರೂ ರದ್ದುಪಡಿಸಲಾಗುವುದು.

ಬಿ) ಡಿಪ್ಲೊಮಾ ಇತ್ಯಾದಿ ವಿದ್ಯಾರ್ಹತೆಗಳು ಪದವಿಗೆ ಸಮಾನವಾಗುವುದಿಲ್ಲ. ಆದ್ದರಿಂದ ಪೊಲೀಸ್ ಸಬ್ಇನ್ಸ್‌ಪೆಕ್ಟರ್ ಹುದ್ದೆಗೆ ಈ ವಿದ್ಯಾರ್ಹತೆಯ ಅಭ್ಯರ್ಥಿಗಳು ಅರ್ಹರಾಗುವುದಿಲ್ಲ.

ಸಿ) ನಿಗದಿತ ವಿದ್ಯಾರ್ಹತೆಯಾದ ಪದವಿಯನ್ನು ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಹಾಗೂ ಅಂಕಪಟ್ಟಿ ಇಲ್ಲದೆ ಇರುವ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಲು ಅರ್ಹರಾಗಿರುವುದಿಲ್ಲ. ಮೇಲಿನ ವಿದ್ಯಾರ್ಹತೆಯನ್ನು ಹೊರತುಪಡಿಸಿ ಬೇರೆ ಯಾವ ವಿದ್ಯಾರ್ಹತೆಯನ್ನೂ ಪರಿಗಣಿಸಲಾಗುವುದಿಲ್ಲ.